ದಸ್ತಾವೇಜು ನಂಬರ್	ದಸ್ತಾವೇಜು ತಾರೀಖು	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ದಸ್ತಾವೇಜು ರಿಜಿಸ್ಟ್ರು ಮಾಡಿಸಿದ ತಾರೀಖು	ದಸ್ತಾವೇಜು ಬರದು ಕೊಟ್ಟವರ ಹೆಸರು ಮತ್ತು ವಾಸಸ್ಥಳ	ದಸ್ತಾವೇಜು ಬರಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
60	1882—83 1—6—82	5—6—82	5—6—82	ಲಿಂಗಪಹಳ್ಳಿ ಮೇಲಣಮನೆ ಲಿಂಗಂಣ.	ಹೊನ್ನವಳ್ಳಿ ತಾಲ್ಲೂಕು ಗುರುಗದಹಳ್ಳಿ ಮಲ್ಲಪಟ್ಟಿ.	45 ರೂಪಾಯಿಗೆ ಲಿಂಗದಹಳ್ಳಿಗಾಮದಲ್ಲಿ ಇರುವ ಸರ್ವೆ 49ನೇ ನಂಬರ್ ಬಾಗಾಯತು ಜಮೀನು ಪೈಕೀ ತನ್ನ ಹಿಸ್ಸೆ ಬಾಬತು ಜಮೀನು ಕ್ರಯಕ್ಕೆ ಕೊಟ್ಟರುವದಾಗಿ ವಗೈರೆ.

ಪಿ. ಎ. ಕೃಷ್ಣಮೂರ್ತಿ,
ರಿಜಿಸ್ಟ್ರಾರ್.

ಮೈಸೂರು ಡಿಸ್ಟ್ರಿಕ್ಟು.

ಮೈಸೂರು ಡಿಸ್ಟ್ರಿಕ್ಟು ಜಡ್ಜ್‌ರ್ಯವರ ಕೋರ್ಟಿನಲ್ಲಿ.

1884ನೇ ಇಸವಿ ಅರ್ಜೀ ನಂಬರ್ 162.

ಮೃತಪಟ್ಟ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಚಂದ್ರಯ್ಯ. ಮೃತಪಟ್ಟ ಸದರೀ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನಿಗೆ ತಮ್ಮ ಆಗಬೇಕೆಂಬ ಹಕ್ಕುದಾರೀ ಮೇಲೆ ಚನ್ನರಾಯಪಟ್ಟಣ ತಾಲ್ಲೂಕು ಶ್ರವಣಬೆಳಗುಳ ಸ್ಥಳದ ಸದರೀ ಚಂದ್ರಯ್ಯನು, ಸದರೀ ವಾಸಸ್ಥನಾಗಿ ಮೃತಪಟ್ಟ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನ ಜಿಂದಗಿ ಬಗ್ಯಾಗಿ ಬರತಕ್ಕ 950 ರೂಪಾಯಿಗಳ ಸಾಲಗಳನ್ನು ವಸೂಲ್‌ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಚಂದ್ರಯ್ಯನ ಅರ್ಜೀದಸ್ತನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂರು ವೊಕ್ಕ್ಯಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ದೊಡ್ಡ ತಮ್ಮಯ್ಯ ವುರಫ್ ಚಲುವರಾಯಪ್ಪನ ಆಸ್ತಿಗೆ ಹಕ್ಕುದಾರರಾದ ವಿಶೆಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 167.

ಮೃತಪಟ್ಟ ಕಿದ್ದನಮಗ ಲಿಂಗನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಲಿಂಗನು, ಮೃತಪಟ್ಟ ಸದರೀ ಕಿದ್ದನಮಗ ಲಿಂಗನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ನಂಜನಗೂಡು ತಾಲ್ಲೂಕು ನಗರ್ಲೆ ಸ್ಥಳದ ಲ್ಲಿಂಗನು ಸದರೀ ವಾಸಸ್ಥನಾಗಿ ಮೃತಪಟ್ಟ ಕಿದ್ದನಮಗ ಲಿಂಗನ ಜಿಂದಗಿ ಬಗ್ಯಾಗಿ ಬರತಕ್ಕ 50 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಲಿಂಗನ ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂರು ವೊಕ್ಕ್ಯಾಂ ಈ ಕೋರ್ಟು ರೂಬರೂ ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕಿದ್ದನ ಮಗ ಲಿಂಗನ ಆಸ್ತಿಗೆ ಹಕ್ಕುದಾರರಾದ ವಿಶೆಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿದೆ.

ಸ್ಯ 1884ನೇ ಇಸವಿ ಅರ್ಜೀ ನಂಬರ್ 172.

ಮೃತಪಟ್ಟ ಕುಳ್ಳಮಾದಯ್ಯನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಗುರುನಂಜಯ್ಯ ಮೈನರ್ ಗಾರ್ಡಿಯರ್ ಮತ್ತು ತಾಯಿ ಮಾದಮ್ಮ. ಮೃತಪಟ್ಟ ಸದರೀ ಕುಳ್ಳಮಾದಯ್ಯನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಯಳಂದೂರು ತಾಲ್ಲೂಕು ಜೋಡಿ ಅಂಬಳೆ ಸ್ಥಳದ ಸದರೀ ಅರ್ಜೀದಾರನು ಸದರೀ ವಾಸಸ್ಥನಾಗಿ ಮೃತ

ಪಟ್ಟ ಕುಳ್ಳಮಾದಯ್ಯನ ಜಿಂದಗಿಬಗ್ಯಾಗಿ ಬರತಕ್ಕ 200 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಗುರುರು ನಂಜಯ್ಯ ಮೈನರ್ ಗಾರ್ಡಿಯ್ಯ ಮತ್ತು ತಾಯಿ ಮಾದಮ್ಮನ ಅರ್ಜೀಯನ್ನು 1884ನೇ ಇಸವೀ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕುಳ್ಳಮಾದಯ್ಯನ ಆಸ್ತಿಗೆ ಹಕ್ಕುದಾರರಾದ ವಿಶಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 173.

ಮೃತಪಟ್ಟ ಪೀರಸಾಬಿ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಫಾತ್ಮಾಬಿ ಇವಳ ಮಗಳು ಹುಸೇಬಿ, ಮೈನರ್ ಗಾರ್ಡಿಯ್ಯ ಫಾತ್ಮಾಬಿ ತಂದೆ ನೇರ ಅಹಮದ್, ಮೃತಪಟ್ಟ ಸದರೀ ಪೀರಸಾಬಿಗೆ ಹೆಂಡತಿ ಮತ್ತು ಮಗಳು ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಸ್ಥಳದ ಸದರೀ ಅರ್ಜೀದಾರು) ಸದರೀ ವಾಸಸ್ಥನಾಗಿ ಮೃತಪಟ್ಟ ಪೀರಸಾಬಿ ಜಿಂದಗಿ ಬಗ್ಯಾಗಿ ಬರತಕ್ಕ 150 ರೂಪಾಯಿಗಳ ಸಾಲಗಳನ್ನು ವಸೂಲ್ ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಫಾತ್ಮಾಬಿ ಇವಳ ಮಗಳು ಹುಸೇಬಿ ಮೈನರ್ ಇವರ ಗಾರ್ಡಿಯ್ಯ ಫಾತ್ಮಾಬಿ ತಂದೆ ನೇರ ಅಹಂಮ್ಮದ್ ಅರ್ಜೀಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪೀರಸಾಬಿ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 186.

ಮೃತಪಟ್ಟ ಹಕೀಂ ರಜಾಬೇಗನ ಆಸ್ತೀ ವಿಷಯದಲ್ಲಿ—

ಅರ್ಜೀದಾರ ಷಂಷೇರ್ಬೇಗ್, ಮೃತಪಟ್ಟ ಸದರೀ ಹಕೀಂ ರಜಾಬೇಗನಿಗೆ ತಮ್ಮ ಆಗಬೇಕೆಂಬ ಹಕ್ಕುದಾರೀ ಮೇಲೆ ಮೈಸೂರು ಮಂಡಿ ಮೊಹಲಾ ಸ್ಥಳದ ಸದರೀ ಷಂಷೇರ್ಬೇಗನು ಸದರೀ ವಾಸಸ್ಥನಾಗಿ ಮೃತಪಟ್ಟ ಸದರೀ ಹಕೀಂ ರಜಾಬೇಗನ ಜಿಂದಗಿ ಬಗ್ಯಾಗಿ ಬರತಕ್ಕ 50 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವೀ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿ ಇರುತ್ತಾನೆ.

ಸದರೀ ದರಖಾಸ್ತುದಾರನಾದ ಷಂಷೇರ್ಬೇಗನ ಅರ್ಜಿಯನ್ನು 1884ನೇ ಇಸವಿ ಜುಲೈ ತಿಂಗಳು ತಾರೀಖು 29ರಲ್ಲು ಮೈಸೂ ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಹಕೀಂ ರಜಾಬೇಗನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ ೧೮೮೪ನೇ ಇಸವಿ ಅರ್ಜೀ ನಂಬರ್ 193.

ಮೃತಪಟ್ಟ ಹಲಗಯ್ಯನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಅಪ್ಪಂಣಾಚಾರಿಯು, ಮೃತಪಟ್ಟ ಸದರೀ ಹಲಗಯ್ಯನಿಗೆ ಅಂಣನ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಹುಣಸೂರು ತಾಲ್ಲೂಕು ಗಾವಡಗೆರೇ ಹೋಬಳಿ ಮನುಗನಹಳ್ಳಿ ಸ್ಥಳದ ಸದರೀ ಅಪ್ಪಣ್ಣಾಚಾರಿಯು ಸದರೀ ವಾಸಸ್ಥನಾಗಿ ಮೃತಪಟ್ಟ ಹಲಗಯ್ಯನ ಜಿಂದಗಿ ಬಗ್ಯಾಗಿ ಬರತಕ್ಕ 200 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಅಪ್ಪಂಣಾಚಾರಿಯ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 29ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನ ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಹಲಗೆಯ್ಯನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಯರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಅರ್ಜೀ ನಂಬರ್ 201.

ಮೃತಪಟ್ಟ ವೆಂಕಟಸಾಮಿಪಿಳ್ಳೆ ಆಸ್ತಿ ವಿಷಯದಲ್ಲಿ—

ಅರ್ಜೀದಾರ ರಂಗಯ್ಯನು, ಮೃತಪಟ್ಟ ಸದರೀ ವೆಂಕಟಸಾಮಿಪಿಳ್ಳೀಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಶ್ರೀರಂಗಪಟ್ಟಣ ತಾಲ್ಲೂಕು ಪಾಲಹಳ್ಳಿ ಸ್ಥಳದ ಸದರೀ ರಂಗಯ್ಯನು, ಸದರೀ ವಾಸಸ್ಥನಾಗಿ ಮೃತಪಟ್ಟ ವೆಂಕಟಸಾಮಿಪಿಳ್ಳೀ ಜಿಂದಗಿ ಬಗ್ಯಾಗಿ ಬರತಕ್ಕ 200 ರೂಪಾಯಿಗಳ ಸಾಲವನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯ್ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ರಂಗಯ್ಯನ ಅರ್ಜೀಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 19ರಲ್ಲು ಮೈಸೂರು ಮೊಕ್ತಾಂ ಈ ಕೋರ್ಟು ರೂಬರೂ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವೆಂಕಟಸಾಮಿಪಿಳ್ಳೀ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಯಿದೆ.

1884ನೇ ಇಸವಿ ಅರ್ಜೀ ನಂಬರ್ 202.

ಮೃತಪಟ್ಟ ಕುಳ್ಳೇಗೌಡನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಪುಟ್ಟಸ್ವಾಮಿ ಮೃತಪಟ್ಟ ಸದರೀ ಕುಳ್ಳೇಗೌಡನಿಗೆ ಮಗ ಆಗಬೇಕೆಂಬ ಹಕ್ಕುದಾರೀ ಮೇಲೆ ಹುಣಸೂರು ತಾಲ್ಲೂಕು ಗಾವಡಗೆರೆ ಹೋಬಳಿ ರಂಗೈನ ಕೊಪ್ಪಲು ಸ್ಥಳದ ಸದರೀ ಪುಟ್ಟಸ್ವಾಮಿಯು ಸದರೀ ವಾಸಸ್ಥನಾಗಿ ಮೃತಪಟ್ಟ ಸದರೀ ಕುಳ್ಳೇಗೌಡನ ಜಿಂದಗಿ ಬಗ್ಯಾಗಿ ಬರತಕ್ಕ 300 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯ್ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಪುಟ್ಟಸ್ವಾಮಿ, ಅರ್ಜಿಯನ್ನು 1884ನೇ ಇಸವಿ ಆಗಸ್ಟು ತಿಂಗಳು ತಾರೀಖು 19ರಲ್ಲು ಮೈಸೂರು ಮೊಕ್ತಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಕುಳ್ಳೇಗೌಡನ ಆಸ್ತಿಗೆ ಹಕ್ಕುದಾರರಾದ ವಿಸಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿಯಿದೆ.

1884ನೇ ಇಸವಿ ಜುಲೈ ತಿಂಗಳು ೧೬ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನನ್ನ ದಸ್ತಖತ್ತಿನೊಡನೆ ಕೊಡೋಣಾಗಿದೆ.

ವಿ. ಯರ್. ನರಸಿಂಹಯ್ಯಂಗಾರ್, ಡಿಸ್ಟ್ರಿಕ್ಟು ಜಡ್ಜ್.

ನಂ. 3. ತಾರೀಖು 1ನೇ ಜುಲೈ 1884.

ಇದರಿಂದ ತಿಳಿಯಪಡಿಸುವದೇನಂದರೆ, ಹೊಳೇ ನರಸೀಪುರ ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಜೇವಾರಸಾಗಿ ಇರತಕ್ಕ ಕೆಳಗೆ ವಿವರಿಸೋಣಾದ ದಸ್ತಾವೇಜನ್ನು ಹಾಜರ್ಮಾಡಿದವನೇ ಆಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನಾಗಲಿ ಈ ನೋಟೀಸ್ ತಾರೀಖು ಲಾಗಾಯತು ಎಂದು ತಿಂಗಳ ಒಳಗಾಗಿ ಸಬ್ ರಿಜಿಸ್ಟ್ರಾರ್ ರೂಬರು ಹಾಜರಾಗಿ ಅದನ್ನು ವಾಪಸ್ ತೆಗದುಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಅನುಸರಿಸಿ ಅದು ನಾಶ ಪಡಿಸಲ್ಪಡುವದು.

ನಂಬರ್.	ದಸ್ತಾವೇಜು ಬರದುಕೊಟ್ಟವರ ಹೆಸರು ಮತ್ತು ವಾಸಸ್ಥಳ.	ಬರಿಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ರಿಜಿಸ್ಟರಾದ ತಾರೀಖು.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
27 ——— 1881—82	ಚೆನ್ನರಾಯಪಟ್ಟಣ ತಾಲ್ಲೂಕು ಜಂಜೂರು ಗ್ರಾಮದ ಸ್ಮಾರ್ತ ಬ್ರಾಹ್ಮಣ ಪನರ್ಷ ವೆಂಕಟರಮಣಯ್ಯನವರ ಮಗ ಜೀರಾಯತು ಜೀವನದ ಮೈಲಾರಯ್ಯ	ಮೈಸೂರು ಕಿಲ್ಲೆಯಲ್ಲಿರುವ ಅರಮನೆ ಇಲಾಖೆ ಬಾಗಾಯಿತು ಕಜೇರಿ ರಸ್ತೇದಾರ ಸ್ಮಾರ್ತ ಬ್ರಾಹ್ಮಣ ಶಿವರಾಮಯ್ಯನವರ ಮಕ್ಕಳು ನಂಜಪ್ಪ	14—6—82	14—6—82	180 ರೂಪಾಯಿನ ಭೂಸ್ಥಿತಿ ಕ್ರಯಪತ್ರ.

ಅಬ್ದುಲ್‌ಖಾದರ್, ಕೆ. ಬಿ.,
ರಿಜಿಸ್ಟ್ರಾರ್.